518 (808) ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಉತ್ತರ ವಲಯ–3ರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲೆ ಅವರ ಹಿಂದಿನ ಜೀಪ್ ಚಾಲಕ ಭ್ರಷ್ಟಾಚಾರದ ದೂರು ನೀಡಿರುವುದು ನಿಜವೇ, ನಿಜವಾಗಿದ್ದಲ್ಲಿ ಕೈಗೊಂಡ ಕ್ರಮವೇನು;

ಆ) ಮಾತೃ ಭಾಷಾ ನೀತಿ ಉಲ್ಲಂಘನೆ ಪಟ್ಟಿ ತಯಾರಿಕೆಯಲ್ಲಿ ಬೆಂಗಳೂರು ಉತ್ತರ ವಲಯ – 3ರ ಕ್ಷೇತ್ರ ಶಿಕ್ಷಣಾಧಿಕಾರಿ ಭ್ರಷ್ಟಾಚಾರ ನಡೆಸಿದ್ದಾರೆಂದು ಇಲಾಖೆಗೆ ದೂರು ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮವೇನು;

ಇ) ಈ ಕ್ಷೇತ್ರದ ಶಿಕ್ಷಣಾಧಿಕಾರಿಗಳ ಮೇಲೆ ಇದುವರೆಗೂ ಕೈಗೊಂಡ ಕ್ರಮಗಳೇನು, ತನಿಖೆಗೆ ಆದೇಶಿಸಿದ್ದಲ್ಲಿ ತನಿಖೆ ಯಾವ ಹಂತದಲ್ಲಿದೆ?

ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಹೌದು. ಸದರಿ ದೂರಿನ ಪತ್ರದಲ್ಲಿ ಮಾಡಿರುವ ಆಪಾದನೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ವಿವರಣೆಯನ್ನು ಸಲ್ಲಿಸುವಂತೆ ತಿಳಿಸಿದೆ. ಕಾರ್ಯದರ್ಶಿ ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ವಿಭಾಗ ಇವರಿಗೆ ತನಿಖೆ ನಡೆಸಿ ವರದಿ ನೀಡುವಂತೆ ತಿಳಿಸಿದೆ.

ಆ) ಈ ಸಂಬಂಧ ಯಾವುದೇ ದೂರು ಬಂದಿರುವುದಿಲ್ಲ.

ಇ) ಮೇಲಿನ 'ಆ' ಭಾಗದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

520 (901) ಶ್ರೀ ಗಡ್ಡದೇವರಮಠ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ):– ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದಿಂದ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ವಿದ್ಯಾರ್ಥಿಗಳಿಗೆ ಮಾತ್ರ ಸೈಕಲ್ ವಿತರಿಸುತ್ತಿದ್ದು; ಬಿ.ಪಿ.ಎಲ್ ಕಾರ್ಡ್ ಹೊಂದಿರದೇ ಇರುವ ಅನೇಕ ಬಡ ವಿದ್ಯಾರ್ಥಿಗಳಿಗೆ ಸೈಕಲ್ ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯದಲ್ಲಿ ಅನೇಕ ಬಡ ಕುಟುಂಬಗಳು ಬಿ.ಪಿ.ಎಲ್. ಕಾರ್ಡ್ ಹೊಂದದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;